CALENDER FOR EVENTS

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ

| WEBSITE : ವಿಳಾಸ | www.anganwadirecruit.kar.nic.in | |
|---|---|---|
| ತಾತ್ಕಾಲಿಕ ವೇಳಾ ಪಟ್ಟಿ | | |
| ವಿವರಣೆ | ದಿನಗಳು | ದಿನಾಂಕ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | – | 17–08–2022ರ ಬೆಳಿಗ್ಗೆ10.00ಗಂಟೆಯಿಂದ |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30ದಿನಗಳು | 15–09–2022 ಸಂಜೆ 5.30 ಗಂಟೆಯವರೆಗೆ |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಅನುಮೋದನೆ ಪಡೆಯುವುದು | 15ದಿನಗಳು | 16–09–2022 ರಿಂದ 30–09–2022ರ ವರೆಗೆ |
| ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಣೆ ಹಾಗೂ ಸಾರ್ವಜನಿಕ ಆಕ್ಷೇಪಣೆ ಸಲ್ಲಿಸುವಿಕೆ ಕಾಲಾವಕಾಶ | 15ದಿನಗಳು | 01–10–2022 ರಿಂದ 15–10–2022ರ ವರೆಗೆ |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆದು ಆಯ್ಕೆಯಾದ ಅಭ್ಯರ್ಥಿಗಳಿಗೆ ಆದೇಶ ನೀಡುವುದು. | 15ದಿನಗಳು | 15–10–2022 ರಿಂದ 30–10–2022ರ ವರೆಗೆ |

ಉಪ ನಿರ್ದೇಶಕರು
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಡಿಕೇರಿ, ಕೊಡಗು ಜಿಲ್ಲೆ

ಕರ್ನಾಟಕ ಸರ್ಕಾರ

ಉಪ ನಿರ್ದೇಶಕರ ಕಾರ್ಯಾಲಯ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಚೈನ್‌ಗೇಟ್ ಬಳಿ, ಮೈಸೂರು ರಸ್ತೆ, ಮಡಿಕೇರಿ, ಕೊಡಗು ಜಿಲ್ಲೆ – 571 201

ಇ–ಮೇಲ್ wcdkodagu@gmail.com ದೂರವಾಣಿ ಸಂಖ್ಯೆ 08272 298379

ಸಂಖ್ಯೆ:ಉನಿಕೊ/ಅಂ.ಕಾ.ಗು/2022–23 ದಿನಾಂಕ : 11–08–2022

## ಪ್ರಕಟಣೆ

ವಿಷಯ:– ಕೊಡಗು ಜಿಲ್ಲೆಯ 3 ತಾಲೂಕಿನ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಆಹ್ವಾನಿಸಿರುವ ಕುರಿತು.

ಉಲ್ಲೇಖ:– ಸರ್ಕಾರದ ಆದೇಶ ಸಂಖ್ಯೆ : ಮಮಇ/303/ಐಸಿಡಿ/2017 ಬೆಂಗಳೂರು ದಿನಾಂಕ 23–09–2017

*****************

ಕೊಡಗು ಜಿಲ್ಲೆಯ ಮಡಿಕೇರಿ, ಸೋಮವಾರಪೇಟೆ ಮತ್ತು ಪೊನ್ನಂಪೇಟೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳ ಅಂಗನವಾಡಿ ಕಾರ್ಯಕರ್ತೆಯರನ್ನು ಗುರುತಿಸಲು ಉಲ್ಲೇಖ(1)ರ ನಿರ್ದೇಶನದಂತೆ ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತೀರ್ಣರಾದ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅನುಬಂಧ–1ರ ನಿಬಂಧನೆಗಳಿಗೆ ಒಳಪಟ್ಟು, ಅನುಬಂಧ–2ರಲ್ಲಿ ನಮೂದಿಸಿರುವ ಗ್ರಾಮಗಳಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅರ್ಜಿಗಳನ್ನು ಆನ್–ಲೈನ್ ಮೂಲಕ ಆಹ್ವಾನಿಸಿ ಪ್ರಕಟಣೆ ಹೊರಡಿಸಲಾಗಿದೆ. ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ:– 17–08–2022ರಂದು ಸಂಜೆ 5:30 ಘಂಟೆಯೊಳಗೆ ಅಥವಾ ಮುಂಚಿತವಾಗಿ ಅರ್ಜಿಯನ್ನು www.anganwadirecruit.kar.nic.in ನಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಲು ಸೂಚಿಸಿದೆ. ನಿಗಧಿತ ಅವಧಿಯ ನಂತರ ಅರ್ಜಿಗಳು ಸ್ವೀಕಾರವಾಗುವುದಿಲ್ಲ ಮತ್ತು ಅಪೂರ್ಣ ಮಾಹಿತಿಯನ್ನೊಳಗೊಂಡ ಅರ್ಜಿಗಳು ತಿರಸ್ಕೃತವಾಗುತ್ತದೆ.

## ಅನುಬಂಧ–1

## I. ಸಾಮಾನ್ಯ ಅರ್ಹತೆಗಳು:

1. ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕ: 17–08–2022ಕ್ಕೆ ಅಭ್ಯರ್ಥಿಯ ವಯಸ್ಸು 18 ರಿಂದ 35 ವಯೋಮಿತಿಯೊಳಗಿರಬೇಕು. ವಿಕಲಚೇತನ ಅಭ್ಯರ್ಥಿಯಾಗಿದ್ದಲ್ಲಿ ವಯಸ್ಸು 45 ವಯೋಮಿತಿ ಯೊಳಗಿರಬೇಕು.

2. ಅಭ್ಯರ್ಥಿಯು ಸ್ಥಳೀಯ ಮಹಿಳೆಯಾಗಿದ್ದು, ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿ ಇರುವ ಅದೇ ಗ್ರಾಮ / ಪುರಸಭೆ ವ್ಯಾಪ್ತಿಯಾಗಿದ್ದಲ್ಲಿ ವಾರ್ಡ್ ವ್ಯಾಪ್ತಿಯ ನಿವಾಸಿಯಾಗಿರಬೇಕು.

3. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ದಿನಾಂಕದ ಮೂರು ವರ್ಷದೊಳಗಿನ ಸಂಬಂಧಿಸಿದ ತಾಲೂಕಿನ ತಹಶೀಲ್ದಾರ್/ಉಪತಹಶೀಲ್ದಾರ್‌ರವರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

4. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಎಸ್.ಎಸ್.ಎಲ್.ಸಿ, ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು, ಹೆಚ್ಚಿನ ಅಂಕಗಳಿಸಿದ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

5. ಕರ್ನಾಟಕ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ/ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು, ಪ್ರಮಾಣ ಪತ್ರ/ಅಂಕ ಪಟ್ಟಿಯು ಗರಿಷ್ಠ 625, ಕನಿಷ್ಠ 219 ಅಂಕಗಳನ್ನು ಹೊಂದಿದ್ದಲ್ಲಿ, ಅಂತಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

6. ಬೇರೆ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ನಿಗದಿಪಡಿಸಿದ ಗರಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

7. ಅಂಗನವಾಡಿ ಕಾರ್ಯಕರ್ತೆಯರು ಶಾಲಾಪೂರ್ವ ಶಿಕ್ಷಣವನ್ನು ಹಾಗೂ ದಾಖಲೆಗಳನ್ನು ಕನ್ನಡದಲ್ಲಿ ನಿರ್ವಹಿಸಬೇಕಾಗಿರುವುದರಿಂದ ಅಭ್ಯರ್ಥಿಗಳು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹ ಅವರು ಕನ್ನಡ ಭಾಷೆಯನ್ನು ಪ್ರಥಮ / ದ್ವಿತೀಯ ಬಾಷೆಯಾಗಿ ವ್ಯಾಸಂಗ ಮಾಡಿರಬೇಕು. ಹಾಗೂ ಮಾತೃ ಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನ ಕುರಿತಂತೆ ಪರೀಕ್ಷಿಸಿ ಅವರನ್ನು ಆಯ್ಕೆ ಮಾಡುವ ಬಗ್ಗೆ ಸಮಿತಿ ನಿರ್ಧರಿಸುತ್ತದೆ.

8. ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೊದಲ ಆದ್ಯತೆಯ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು. ಆದರೆ ಸ್ಥಳೀಯರು, ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

9. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗಳಿಗೆ ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆದ ಹಾಲಿ/ಮಾಜಿ ನಿವಾಸಿಗಳು ಅರ್ಜಿ ಸಲ್ಲಿಸಿದ್ದಲ್ಲಿ ಕ್ರಮ ಸಂಖ್ಯೆ(8)ನೇ ಯವರನ್ನು ಹೊರತು ಪಡಿಸಿ ಇತರೆ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೇ ಎರಡನೇ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು. ಇವರಿಗೆ ವಾಸಸ್ಥಳ ದೃಢೀಕರಣ ಕಡ್ಡಾಯವಲ್ಲ ಆದರೆ ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

10. ಅ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಕ್ರಮ ಸಂಖ್ಯೆ (8) ಮತ್ತು (9) ರ ಅಭ್ಯರ್ಥಿಗಳನ್ನು ಹೊರತುಪಡಿಸಿ ಇತರ ಎಲ್ಲಾ ಸ್ವೀಕೃತ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೇ ನೇರವಾಗಿ ವಿಧವೆಯರನ್ನೇ ಆಯ್ಕೆ ಮಾಡಲಾಗುವುದು. ಆದರೆ ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸಲಾಗುವುದಿಲ್ಲ. ವಿಧವೆ ಅಭ್ಯರ್ಥಿಯು ಎಸ್,ಎಸ್.ಎಲ್.ಸಿ ಉತ್ತೀರ್ಣ, ಸ್ಥಳೀಯರು ಮತ್ತು ವಯೋಮಿತಿಯೊಳಗಿರಬೇಕಾಗಿರುವುದು ಕಡ್ಡಾಯವಾಗಿರುತ್ತದೆ.

ಆ. ವಿಧವೆಯರಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಗೆ (ವಿಧವೆಗೆ) ಮೊದಲ ಆದ್ಯತೆ ನೀಡಲಾಗುವುದು

ಇ. ವಿಧವೆಯರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರ ಸಲ್ಲಿಸಿರುತ್ತಾರೊ, ಆ ಸ್ಥಳವನ್ನೇ ಅವರ ವಾಸಸ್ಥಳ ಎಂದು ಪರಿಗಣಿಸಲಾಗುವುದು.

ಈ. ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.

ಪರಿಶಿಷ್ಠ ಜಾತಿ/ಪಂಗಡದವರಿಗೆ ಕಾರ್ಯಕರ್ತೆ ಹುದ್ದೆ ನಿಗದಿಪಡಿಸಿದ ಕೇಂದ್ರಗಳಲ್ಲಿ ಆ ವರ್ಗಕ್ಕೆ ಸೇರಿದ ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ ಮೇಲೆ ತಿಳಿಸಿದಂತೆ ವಿಧವೆಯರನ್ನೇ ಆಯ್ಕೆ ಮಾಡಲಾಗುವುದು. ಬೇರೆ ವರ್ಗಗಳ ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

ಉ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅಂಗವಿಕಲರು ಅರ್ಜಿ ಸಲ್ಲಿಸಿದಾಗ ಕ್ರಮ ಸಂಖ್ಯೆ (8) (9) ಮತ್ತು (10)ನೇಯವರನ್ನು ಹೊರತುಪಡಿಸಿ ಇತರೆ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೇ ನಾಲ್ಕನೆ ಆದ್ಯತೆ ಮೇರೆಗೆ ನೇರವಾಗಿ ಅಂಗವಿಕಲರನ್ನೇ ಆಯ್ಕೆ ಮಾಡಲಾಗುವುದು. ಆದರೆ ಅಂಗವಿಕಲ ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರುವುದು, ಸ್ಥಳೀಯರು ಮತ್ತು 45 ವಯೋಮಿತಿ ಒಳಗಿರಬೇಕಾಗಿರುವುದು ಕಡ್ಡಾಯ.

ಊ. ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರ ಸಲ್ಲಿಸುತ್ತಾರೋ ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸಲಾಗುವುದು.

ಋ. ಅಂಗನವಾಡಿ ಕಾರ್ಯಕರ್ತೆ ಹುದ್ದೆಯಲ್ಲಿ 3-6 ರಿಂದ ವರ್ಷ ಮಕ್ಕಳಿಗೆ ಆಟ ಮತ್ತು ಅಭಿನಯ ಗೀತೆಗಳ ಮೂಲಕ ಶಾಲಾ ಪೂರ್ವ ಶಿಕ್ಷಣವನ್ನು ನೀಡಲಾಗುತ್ತಿದ್ದು, ಚಟುವಟಿಕೆಯ ವೇಳೆಯಲ್ಲಿ ಮಕ್ಕಳನ್ನು ಹಿಡಿದೆತ್ತಿ ನಿಲ್ಲಿಸುವುದು ಹಾಗೂ ಅಭಿನಯ ಮಾಡಿ ತೋರಿಸಬೇಕಾಗಿರುತ್ತದೆ. ವೃತ್ತ ಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿ ನಿರ್ವಹಿಸಬೇಕಾಗಿರುತ್ತದೆ. **ಆದ ಕಾರಣ ಕಿವುಡರು ಮತ್ತು ಮೂಕರು, ಕುರುಡರು, ಬುದ್ಧಿಮಾಂದ್ಯರು, ಮಾನಸಿಕ ಅಸ್ವಸ್ಥರು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಹರಾಗಿರುವುದಿಲ್ಲ.**

ಎ. ಇವರನ್ನು ಹೊರತುಪಡಿಸಿ ಇತರೆ ದೈಹಿಕ ಅಂಗವೈಕಲ್ಯತೆಯುಳ್ಳವರು, ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವರು ಶೇ.60ಕ್ಕಿಂತ ಕಡಿಮೆ ಅಂಗವೈಕಲ್ಯತೆಯುಳ್ಳವರು ಅರ್ಜಿ ಸಲ್ಲಿಸಬಹುದು. ಅಂಗೀಕೃತ ಪ್ರಾಧಿಕಾರ(ಜಿಲ್ಲಾ ವೈದ್ಯಕೀಯ ಮಂಡಳಿ) ದಿಂದ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಾಗಿದ್ದಾರೆಂಬುದರ ಬಗ್ಗೆ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಹಾಜರುಪಡಿಸಬೇಕು. ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಂಗವಿಕಲತೆಯ ಬಗ್ಗೆ ಸಂಶಯ ಉಂಟಾದಲ್ಲಿ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ತಿಳಿಸಲಾಗುವುದು. ಸದರಿ ಹುದ್ದೆ ನಿರ್ವಹಿಸಲು ಸಮರ್ಥರೇ ಎಂಬ ಬಗ್ಗೆ ಸಮಿತಿ ನಿರ್ಧರಿಸಬಹುದಾಗಿದೆ.

ಏ. ಒಂದೇ ಹುದ್ದೆಗೆ ಇಬ್ಬರು ಅಂಗವಿಕಲರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.

11. ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ಆಯ್ಕೆಯಾಗುವ ಸಂಭವವಿದ್ದಲ್ಲಿ, ಆಯ್ಕೆ ಪಟ್ಟಿ ಪ್ರಕಟಿಸುವ ಮುನ್ನ ಚುನಾಯಿತ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ರಾಜೀನಾಮೆ ಅಂಗೀಕೃತ ಪತ್ರ ನೀಡಬೇಕಾಗಿರುವುದು ಕಡ್ಡಾಯ. ಅಂದರೆ ಯಾವುದಾದರು ಒಂದು ಸ್ಥಾನದಲ್ಲಿ ಮಾತ್ರ ಕೆಲಸ ನಿರ್ವಹಿಸಲು ಅವಕಾಶವಿದೆ.

## II. ಇತರೆ ನಿಬಂಧನೆಗಳು:

1. ಅಂಗನವಾಡಿ ಕಾರ್ಯಕರ್ತೆ ಹುದ್ದೆಯು ಗೌರವಧನ ಆಧಾರಿತ ಸೇವೆಯಾಗಿದ್ದು, ಮೀಸಲಾತಿ ತತ್ವಗಳು ಅನ್ವಯಿಸುವುದಿಲ್ಲ. ಖಾಲಿ ಇರುವ ಅಂಗನವಾಡಿ ಕೇಂದ್ರದ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ/ನಗರ ಪ್ರದೇಶದ ಕಂದಾಯ ವಾರ್ಡ್‌ನ ಒಟ್ಟು ಜನಸಂಖ್ಯೆಯು ಶೇಕಡಾ 40 ಕ್ಕಿಂತ ಹೆಚ್ಚು ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ವರ್ಗದವರನ್ನು ಒಳಗೊಂಡಿದ್ದಲ್ಲಿ ಆ ವರ್ಗದವರನ್ನು ಮಾತ್ರ, ಆ ಗ್ರಾಮದ ಸದರಿ ಕೇಂದ್ರಕ್ಕೆ ಕಾರ್ಯಕರ್ತೆ ಹುದ್ದೆಗೆ ನಿಗದಿತ ವಿದ್ಯಾರ್ಹತೆಯ ಅನುಸಾರ ಪರಿಗಣಿಸಲಾಗುವುದು.

2. ಶೇಕಡಾ 25 ಕ್ಕಿಂತ ಹೆಚ್ಚು ಅಲ್ಪಸಂಖ್ಯಾತ ( ಮುಸ್ಲಿಮರು, ಕ್ರಿಶ್ಚಿಯನ್ನರು, ಜೈನರು, ಬೌದ್ಧರು, ಪಾರ್ಸಿಗಳು ಮತ್ತು ಸಿಕ್ಕರು) ಜನಸಂಖ್ಯೆಯಿರುವ ಇರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪ ಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆ ಮಾಡಲಾಗುವುದು.

3. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕ ಗಳಿಸಿದ್ದಲ್ಲಿ ವಯೋಹಿರಿಯರನ್ನು ಪರಿಗಣಿಸಲಾಗುವುದು.

4. ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆಗೆ ಎಸ್.ಎಸ್.ಎಲ್.ಸಿ ಕನಿಷ್ಠ ವಿದ್ಯಾರ್ಹತೆ ನಿಗಧಿಪಡಿಸಲಾಗಿದ್ದು, ಎಸ್.ಎಸ್.ಎಲ್.ಸಿಯಲ್ಲಿ ಪಡೆದಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು, ಹಾಗೂ ಮಾಜಿ ದೇವದಾಸಿಯರು, ಯೋಜನಾ ನಿರಾಶ್ರಿತರು, ವಿಚ್ಛೇದಿತ ಮಹಿಳೆಯರು, ಪರಿತ್ಯಕ್ತೆಯರು ಹೆಚ್ಚಿನ 5 ಬೋನಸ್ ಅಂಕಗಳಿಗೆ ಅರ್ಹರಿರುತ್ತಾರೆ. ಈ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ದಾಖಲಾತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು

**5. ಆನ್- ಲೈನ್‌ನಲ್ಲಿ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು.**

1) ಅರ್ಜಿ ನಿಗದಿತ ನಮೂನೆಯಲ್ಲಿ ( ಆನ್‌ಲೈನ್‌ನಲ್ಲಿ )

2) ಜನನ ಪ್ರಮಾಣ ಪತ್ರ/ಜನ್ಮ ದಿನಾಂಕವಿರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ.

3) ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ.

4) ಮೂರು ವರ್ಷದೊಳಗಿನ ತಹಶೀಲ್ದಾರ್‌ರವರಿಂದ ಪಡೆದ ವಾಸಸ್ಥಳ ದೃಡೀಕರಣ ಪತ್ರ.

5) ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.

6) ವಿಧವೆಯಾಗಿದ್ದಲ್ಲಿ, ಪತಿಯ ಮರಣ ಪ್ರಮಾಣ ಪತ್ರ. (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)

7) ರೈತ ಮಹಿಳೆ ವಿಧವೆಯಾಗಿದ್ದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

8) ವಿಕಲಚೇತನರಾಗಿದ್ದಲ್ಲಿ, ಅಂಗವಿಕಲತೆ ಪ್ರಮಾಣ ಪತ್ರ. (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ).

8) ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನ ಪ್ರಮಾಣ ಪತ್ರ. ( ನ್ಯಾಯಾಲಯದಿಂದ ವಿಚ್ಛೇಧನ ಪತ್ರ )

9) ಮಾಜಿ ದೇವದಾಸಿಯಾಗಿದ್ದಲ್ಲಿ ದೇವದಾಸಿ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.

10) ಪರಿತ್ಯಕ್ತೆಯಾಗಿದ್ದಲ್ಲಿ ಪರಿತ್ಯಕ್ತೆ ಬಗ್ಗೆ ಗ್ರಾಮ ಪಂಚಾಯ್ತಿಯಿಂದ ಪಡೆದ ಪ್ರಮಾಣ ಪತ್ರ.

11) ಇಲಾಖಾ ಸುಧಾರಣಾ ಸಂಸ್ಥೆ/ ರಾಜ್ಯ ಸುಧಾರಣಾ ಸಂಸ್ಥೆಯ ನಿವಾಸಿಯಾಗಿದ್ದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ. (ಇಲಾಖಾ ಸಂಸ್ಥೆಯ ನಿವಾಸಿಯಾಗಿದ್ದಲ್ಲಿ ಮಾತ್ರ)

12) ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

## III.

1. ಅಭ್ಯರ್ಥಿಗಳು ಸಲ್ಲಿಸಲಾದ ಅಗತ್ಯ ದಾಖಲಾತಿಗಳಾದ ಅಂಕಪಟ್ಟಿ, ವಾಸಸ್ಥಳ ದೃಢೀಕರಣ ಪತ್ರ, ಜಾತಿ ದೃಢೀಕರಣ ಪತ್ರಗಳು ಹಾಗೂ ಇತರೆ ದಾಖಲಾತಿಗಳು ಕ್ರಮಬದ್ಧವಾಗಿದ್ದಲ್ಲಿ ವಿದ್ಯಾರ್ಹತೆಯಲ್ಲಿ ಪಡೆದ ಅಂಕ ಹಾಗೂ ಬೋನಸ್ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆಯನ್ನು ನಿಯಮಾನುಸಾರ ನಿರ್ಧರಿಸಲಾಗುವುದು ಮತ್ತು ಯಾವುದೇ ಸಂದರ್ಶನ ಪ್ರಕ್ರಿಯೆ ಇರುವುದಿಲ್ಲ.

ಅ) ಆಯ್ಕೆಯಾದ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ. 10000-00 ಗೌರವಧನ ಪಾವತಿಸಲಾಗುವುದು.

2. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಲು ಆನ್-ಲೈನ್ ವಿಳಾಸ

www.anganwadirecruit.kar.nic.in

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಡಿಕೇರಿ, ಕೊಡಗು ಜಿಲ್ಲೆ

## ಅನುಬಂಧ–2

ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಖಾಲಿ ಇರುವ ಅಂಗನವಾಡಿ ಕೇಂದ್ರಗಳ ಪಟ್ಟಿ

| ಕ್ರ.ಸಂ. | ತಾಲೂಕಿನ ಹೆಸರು | ಗ್ರಾಮ ಪಂಚಾಯತ್ | ಅಂಗನವಾಡಿ ಕೇಂದ್ರದ ಹೆಸರು | ನಿಗದಿಪಡಿಸಲಾದ ವರ್ಗ |
|---|---|---|---|---|
| 1 | ಮಡಿಕೇರಿ | ಎಮ್ಮೆಮಾಡು | ಕುರುಳಿ | ಇತರೆ |
| 2 | ಮಡಿಕೇರಿ | ಕುಂದಚೇರಿ | ಪದಕಲ್ಲು | ಇತರೆ |
| 3 | ಮಡಿಕೇರಿ | ಕಾಂತೂರು ಮೂರ್ನಾಡು | ಐಕೊಳ 2 | ಇತರೆ |
| 4 | ಪೊನ್ನಂಪೇಟೆ | ಶ್ರೀಮಂಗಲ | ಬೀರುಗ 1 | ಎಸ್.ಟಿ. |
| 5 | ಪೊನ್ನಂಪೇಟೆ | ಹಾತೂರು | ಹೊಸನಲ್ಲಿಕೋಟೆ | ಇತರೆ |
| 6 | ಪೊನ್ನಂಪೇಟೆ | ಬಿಟ್ಟಂಗಾಲ | ಪೊದಕೇರಿ ಮಿನಿ | ಇತರೆ |
| 7 | ಪೊನ್ನಂಪೇಟೆ | ಕುಟ್ಟ | ಸಿಂಕೋನ ಮಿನಿ | ಎಸ್.ಟಿ. |
| 8 | ಪೊನ್ನಂಪೇಟೆ | ಬಿರುನಾಣಿ | ಕೂಟಿಯಾಲ | ಇತರೆ |
| 9 | ಪೊನ್ನಂಪೇಟೆ | ಬಿ.ಶೆಟ್ಟಿಗೇರಿ | ಕಾಟಿಗುಂಡಿ ಪೈಸಾರಿ | ಇತರೆ |
| 10 | ಪೊನ್ನಂಪೇಟೆ | ಚೆನ್ನಯ್ಯನಕೋಟೆ | ಹೊಲಮಾಳ | ಇತರೆ |
| 11 | ಪೊನ್ನಂಪೇಟೆ | ಕಾರ್ಮಾಡು | ಕನ್ನಡಮಠ | ಇತರೆ |
| 12 | ಪೊನ್ನಂಪೇಟೆ | ಪೊನ್ನಂಪೇಟೆ | ಹಳ್ಳಿಗಟ್ಟು ಮಿನಿ | ಇತರೆ |

ಉಪ ನಿರ್ದೇಶಕರು
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಡಿಕೇರಿ, ಕೊಡಗು ಜಿಲ್ಲೆ

ಕರ್ನಾಟಕ ಸರ್ಕಾರ
ಉಪ ನಿರ್ದೇಶಕರ ಕಾರ್ಯಾಲಯ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಚೈನ್‌ಗೇಟ್ ಬಳಿ, ಮೈಸೂರು ರಸ್ತೆ, ಮಡಿಕೇರಿ, ಕೊಡಗು ಜಿಲ್ಲೆ – 571 201
ಇ–ಮೇಲ್ wcdkodagu@gmail.com ದೂರವಾಣಿ ಸಂಖ್ಯೆ : 08272 298379

ಸಂಖ್ಯೆ: ಉನಿಕೊ/ಅಂ.ಕಾ.ಗು/2022–23

ದಿನಾಂಕ : 1[illegible]–08–2022

# ಪ್ರಕಟಣೆ

ವಿಷಯ:– ಕೊಡಗು ಜಿಲ್ಲೆಯ 3 ತಾಲೂಕಿನ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನಿಸಿರುವ ಕುರಿತು.

ಉಲ್ಲೇಖ:– ಸರ್ಕಾರದ ಆದೇಶ ಸಂಖ್ಯೆ:ಮಮಇ/303/ಐಸಿಡಿ/ 2017 ಬೆಂಗಳೂರು ದಿನಾಂಕ 23–09–2017

*****************

ಕೊಡಗು ಜಿಲ್ಲೆಯ ಮಡಿಕೇರಿ, ಸೋಮವಾರಪೇಟೆ, ಪೊನ್ನಂಪೇಟೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳ ಅಂಗನವಾಡಿ ಸಹಾಯಕಿಯರನ್ನು ಗುರುತಿಸಲು ಉಲ್ಲೇಖ 1ರ ನಿರ್ದೇಶನದಂತೆ **4ನೇ ತರಗತಿ ತೇರ್ಗಡೆ, ಗರಿಷ್ಠ 9ನೇ ತರಗತಿ** ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅನುಬಂಧ–1ರ ನಿಬಂಧನೆಗಳಿಗೆ ಒಳಪಟ್ಟು, ಅನುಬಂಧ–2ರಲ್ಲಿ ನಮೂದಿಸಿರುವ ಗ್ರಾಮಗಳಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅರ್ಜಿಗಳನ್ನು ಆನ್–ಲೈನ್ ಆಹ್ವಾನಿಸಿ ಪ್ರಕಟಣೆ ಹೊರಡಿಸಲಾಗಿದೆ. ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ: 15–09–2022ರಂದು ಸಂಜೆ 5–30 ಘಂಟೆಯೊಳಗೆ ಅಥವಾ ಮುಂಚಿತವಾಗಿ ಅರ್ಜಿಯನ್ನು www.anganwadirecruit.kar.nic.in ನಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಲು ಸೂಚಿಸಿದೆ. ನಿಗದಿತ ಅವಧಿಯ ನಂತರ ಅರ್ಜಿಗಳು ಸ್ವೀಕಾರವಾಗುವುದಿಲ್ಲ ಮತ್ತು ಅಪೂರ್ಣ ಮಾಹಿತಿಯನ್ನೊಳಗೊಂಡ ಅರ್ಜಿಗಳನ್ನು ತಿರಸ್ಕೃತವಾಗುತ್ತದೆ.

## ಅನುಬಂಧ–1

### 1. ಸಾಮಾನ್ಯ ಅರ್ಹತೆಗಳು:

1 ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕ : 15–09–2022ಕ್ಕೆ ಅಭ್ಯರ್ಥಿಯ ವಯಸ್ಸು 18 ರಿಂದ 35 ವರ್ಷ ವಯೋಮಿತಿಯೊಳಗಿರಬೇಕು.

2 ಅಭ್ಯರ್ಥಿಯು ಸ್ಥಳೀಯ ಮಹಿಳೆಯಾಗಿದ್ದು, ಅಂಗನವಾಡಿ ಸಹಾಯಕಿ ಹುದ್ದೆ ಖಾಲಿ ಇರುವ ಅದೇ ಗ್ರಾಮ/ಪುರಸಭೆ ವ್ಯಾಪ್ತಿಯಾಗಿದ್ದಲ್ಲಿ ವಾರ್ಡ್ ವ್ಯಾಪ್ತಿಯ ನಿವಾಸಿಯಾಗಿರಬೇಕು.

3 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ದಿನಾಂಕದ ಮೂರು ವರ್ಷದೊಳಗಿನ ತಹಶೀಲ್ದಾರ್/ ಉಪತಹಶೀಲ್ದಾರ್‌ರವರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

4 ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕನಿಷ್ಠ **4ನೇ ತರಗತಿ ತೇರ್ಗಡೆ, ಗರಿಷ್ಠ 9ನೇ ತರಗತಿ** ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಇದರಲ್ಲಿ ಹೆಚ್ಚಿನ ವಿದ್ಯಾರ್ಹತೆಯುಳ್ಳವರನ್ನು ಆಯ್ಕೆ ಮಾಡಲಾಗುವುದು. 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಒಂದೇ ವಿದ್ಯಾರ್ಹತೆಯುಳ್ಳ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ ಹೆಚ್ಚು ಅಂಕಗಳಿಸಿದವರನ್ನು ಆಯ್ಕೆ ಮಾಡಲಾಗುವುದು.

5 ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ಮೊದಲ ಆಧ್ಯತೆಯ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು. ಆದರೆ ಸ್ಥಳೀಯರು, ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

6 ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗಳಿಗೆ ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆದ ಹಾಲಿ/ಮಾಜಿ ನಿವಾಸಿಗಳು ಅರ್ಜಿ ಸಲ್ಲಿಸಿದ್ದಲ್ಲಿ ಕ್ರಮ ಸಂಖ್ಯೆ (5)ನೇ ಯವರನ್ನು ಹೊರತು ಪಡಿಸಿ ಇತರೆ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸಿದೇ ಎರಡನೇ ಆದ್ಯತೆ ಮೇರೆಗೆ ನೇರವಾಗಿ ಅವರನ್ನೇ ಆಯ್ಕೆ ಮಾಡಲಾಗುವುದು. ಇವರಿಗೆ ವಾಸಸ್ಥಳ ದೃಢೀಕರಣ ಕಡ್ಡಾಯವಲ್ಲ ಆದರೆ ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

7 ಅ. ಅಂಗನವಾಡಿ ಸಹಾಯಕಿ ಹುದ್ದೆಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಕ್ರಮ ಸಂಖ್ಯೆ (5) ಮತ್ತು (6) ರ ಅಭ್ಯರ್ಥಿಗಳನ್ನು ಹೊರತುಪಡಿಸಿ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೇ ನೇರವಾಗಿ ವಿಧವೆಯರನ್ನೇ ಆಯ್ಕೆ ಮಾಡಲಾಗುವುದು. ಆದರೆ ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸಲಾಗುವುದಿಲ್ಲ. ವಿಧವೆ ಅಭ್ಯರ್ಥಿಯು 4ನೇ ತರಗತಿ ಉತ್ತೀರ್ಣ, ಸ್ಥಳೀಯರು ಮತ್ತು ವಯೋಮಿತಿಯೊಳಗಿರಬೇಕಾಗಿರುವುದು ಕಡ್ಡಾಯವಾಗಿರುತ್ತದೆ.

ಆ. ವಿಧವೆಯರಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಗೆ (ವಿಧವೆಗೆ) ಮೊದಲ ಆದ್ಯತೆ ನೀಡಲಾಗುವುದು

ಇ. ವಿಧವೆಯರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರ ಸಲ್ಲಿಸಿರುತ್ತಾರೊ ಆ ಸ್ಥಳವನ್ನೇ ಅವರ ವಾಸಸ್ಥಳ ಎಂದು ಪರಿಗಣಿಸಲಾಗುವುದು.

ಈ. ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.

ಪರಿಶಿಷ್ಠ ಜಾತಿ/ಪಂಗಡದವರಿಗೆ ಸಹಾಯಕಿ ಹುದ್ದೆ ನಿಗದಿಪಡಿಸಿದ ಕೇಂದ್ರಗಳಲ್ಲಿ ಆ ವರ್ಗಕ್ಕೆ ಸೇರಿದ ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ ಮೇಲೆ ತಿಳಿಸಿದಂತೆ ವಿಧವೆಯರನ್ನೇ ಆಯ್ಕೆ ಮಾಡಲಾಗುವುದು. ಬೇರೆ ವರ್ಗಗಳ ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

8 ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ಆಯ್ಕೆಯಾಗುವ ಸಂಭವವಿದ್ದಲ್ಲಿ, ಆಯ್ಕೆ ಪಟ್ಟಿ ಪ್ರಕಟಿಸುವ ಮುನ್ನ ಚುನಾಯಿತ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ರಾಜೀನಾಮೆ ಅಂಗೀಕೃತ ಪತ್ರ ನೀಡಬೇಕಾಗಿರುವುದು ಕಡ್ಡಾಯ. ಅಂದರೆ ಯಾವುದಾದರು ಒಂದು ಸ್ಥಾನದಲ್ಲಿ ಮಾತ್ರ ಕೆಲಸ ನಿರ್ವಹಿಸಲು ಅವಕಾಶವಿದೆ.

## II. ಇತರೆ ನಿಬಂಧನೆಗಳು:

1. ಅಂಗನವಾಡಿ ಸಹಾಯಕಿ ಹುದ್ದೆಯು ಗೌರವಧನ ಆಧಾರಿತ ಸೇವೆಯಾಗಿದ್ದು, ಮೀಸಲಾತಿ ತತ್ವಗಳು ಅನ್ವಯಿಸುವುದಿಲ್ಲ. ಖಾಲಿ ಇರುವ ಅಂಗನವಾಡಿ ಕೇಂದ್ರದ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ/ನಗರ ಪ್ರದೇಶದ ಕಂದಾಯ ವಾರ್ಡ್‌ನ ಒಟ್ಟು ಜನಸಂಖ್ಯೆಯು ಶೇಕಡಾ 40 ಕ್ಕಿಂತ ಹೆಚ್ಚು ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ವರ್ಗದವರನ್ನು ಒಳಗೊಂಡಿದ್ದಲ್ಲಿ ಆ ವರ್ಗದವರನ್ನು ಮಾತ್ರ, ಆ ಗ್ರಾಮದ ಸದರಿ ಕೇಂದ್ರಕ್ಕೆ ಸಹಾಯಕಿ ಹುದ್ದೆಗೆ ನಿಗದಿತ ವಿದ್ಯಾರ್ಹತೆಯ ಅನುಸಾರ ಪರಿಗಣಿಸಲಾಗುವುದು.

2. ಶೇಕಡಾ 25 ಕ್ಕಿಂತ ಹೆಚ್ಚು ಅಲ್ಪಸಂಖ್ಯಾತ (ಮುಸ್ಲಿಮರು, ಕ್ರಿಶ್ಚಿಯನ್ನರು, ಜೈನರು, ಬೌದ್ಧರು, ಪಾರ್ಸಿಗಳು ಮತ್ತು ಸಿಕ್ಕರು) ಜನಸಂಖ್ಯೆಯಿರುವ ಇರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ

ಆಯಾ ಅಲ್ಪ ಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆ ಮಾಡಲಾಗುವುದು.

3. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕ ಗಳಿಸಿದ್ದಲ್ಲಿ ವಯೋಹಿರಿಯರನ್ನು ಪರಿಗಣಿಸಲಾಗುವುದು.

4.ಅಂಗನವಾಡಿ ಸಹಾಯಕಿಯ ಹುದ್ದೆಯಲ್ಲಿ ಅಂಗನವಾಡಿ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಬೇಯಿಸಿ/ಸಿದ್ಧಪಡಿಸಿ ಉಣಬಡಿಸುವುದು, ಕೇಂದ್ರವನ್ನು ಸ್ವಚ್ಛಗೊಳಿಸುವುದು, ಮಕ್ಕಳನ್ನು ಅವರ ಮನೆಗಳಿಂದ ಕೇಂದ್ರಕ್ಕೆ ಕರೆತರುವುದು ಹಾಗೂ ಕಾರ್ಯಕರ್ತೆಯು ವೃತ್ತ ಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿಗೆ ಹೋದಾಗ ಅಂಗನವಾಡಿ ಕೇಂದ್ರದ ಜವಬ್ದಾರಿಯನ್ನು ನಿರ್ವಹಿಸಬೇಕು. **ಆದ್ದರಿಂದ ಸಹಾಯಕಿಯ ಹುದ್ದೆಗೆ ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.**

5.ಅಂಗನವಾಡಿ ಸಹಾಯಕಿ ಆಯ್ಕೆಗೆ ಕನಿಷ್ಠ 4ನೇ ತರಗತಿ ತೇರ್ಗಡೆ ಮತ್ತು ಗರಿಷ್ಟ 9ನೇ ತರಗತಿ ವಿದ್ಯಾರ್ಹತೆ ನಿಗಧಿಪಡಿಸಲಾಗಿದ್ದು, ಪಡೆದಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು, ಹಾಗೂ ಮಾಜಿ ದೇವದಾಸಿಯರು, ಯೋಜನಾ ನಿರಾಶ್ರಿತರು, ವಿಚ್ಛೇದಿತ ಮಹಿಳೆಯರು, ಪರಿತ್ಯಕ್ತೆಯರು ಹೆಚ್ಚಿನ 5 ಬೋನಸ್ ಅಂಕಗಳಿಗೆ ಅರ್ಹರಿರುತ್ತಾರೆ. ಈ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ದಾಖಲಾತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು.

1) ಅರ್ಜಿ ನಿಗದಿತ ನಮೂನೆಯಲ್ಲಿ. (ಆನ್-ಲೈನ್‌ನಲ್ಲಿ)
2) ಜನನ ಪ್ರಮಾಣ ಪತ್ರ.
3) ನಿಗಧಿತ ವಿದ್ಯಾರ್ಹತೆಯ ಅಂಕಪಟ್ಟಿ.
4) ಮೂರು ವರ್ಷದೊಳಗಿನ ತಹಶೀಲ್ದಾರ್‌ರವರಿಂದ ಪಡೆದ ವಾಸಸ್ಥಳ ದೃಡೀಕರಣ ಪತ್ರ.
5) ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6) ವಿಧವೆಯಾಗಿದ್ದಲ್ಲಿ, ಪತಿಯ ಮರಣ ಪತ್ರ. (ವಿಧವಾ ವೇತನದ ಧೃಡೀಕರಣವನ್ನು ಪರಿಗಣಿಸುವುದಿಲ್ಲ)
7)ರೈತ ಮಹಿಳೆ ವಿಧವೆಯಾಗಿದ್ದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
8) ವಿಚ್ಛೇಧಿತರಾಗಿದ್ದಲ್ಲಿ, ವಿಚ್ಛೇಧನ ಪ್ರಮಾಣ ಪತ್ರ.
9) ಮಾಜಿ ದೇವದಾಸಿಯಾಗಿದ್ದಲ್ಲಿ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
10) ಪರಿತ್ಯಕ್ತೆ ಬಗ್ಗೆ ಗ್ರಾಮ ಪಂಚಾಯ್ತಿಯಿಂದ ಪಡೆದ ಪ್ರಮಾಣ ಪತ್ರ. (ಪರಿತ್ಯಕ್ತೆಯಾಗಿದ್ದಲ್ಲಿ ಮಾತ್ರ).
11) ಇಲಾಖಾ ಸುಧಾರಣಾ ಸಂಸ್ಥೆ / ರಾಜ್ಯ ಸುಧಾರಣಾ ಸಂಸ್ಥೆಯ ನಿವಾಸಿಯಾಗಿದ್ದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ. (ಇಲಾಖಾ ಸಂಸ್ಥೆಯ ನಿವಾಸಿಯಾಗಿದ್ದಲ್ಲಿ ಮಾತ್ರ)
12) ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರ.

III.

1. ಅಭ್ಯರ್ಥಿಗಳು ಸಲ್ಲಿಸಲಾದ ಅಗತ್ಯ ದಾಖಲಾತಿಗಳಾದ ಅಂಕಪಟ್ಟಿ, ವಾಸಸ್ಥಳ ದೃಡೀಕರಣ ಪತ್ರ, ಜಾತಿ ದೃಢೀಕರಣ ಪತ್ರಗಳು ಹಾಗೂ ಇತರೆ ದಾಖಲಾತಿಗಳು ಕ್ರಮಬದ್ಧವಾಗಿದ್ದಲ್ಲಿ ವಿದ್ಯಾರ್ಹತೆಯಲ್ಲಿ ಪಡೆದ ಅಂಕ ಹಾಗೂ ಬೋನಸ್ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆಯನ್ನು ನಿರ್ಧರಿಸಲಾಗುವುದು ಮತ್ತು ಯಾವುದೇ ಸಂದರ್ಶನ ಪ್ರಕ್ರಿಯೆ ಇರುವುದಿಲ್ಲ.
2. ಆಯ್ಕೆಯಾದ ಅಂಗನವಾಡಿ ಸಹಾಯಕಿಗೆ ಮಾಹೆಯಾನ ರೂ. 5250-00ಗಳ ಗೌರವಧನ ಪಾವತಿಸಲಾಗುವುದು.
3. ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಲು ಆನ್-ಲೈನ್ ವಿಳಾಸ

www.anganwadirecruit.kar.nic.in

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಕೊಡಗು ಜಿಲ್ಲೆ, ಮಡಿಕೇರಿ

## ಅನುಬಂಧ-2

ಅಂಗನವಾಡಿ ಸಹಾಯಕಿ ಹುದ್ದೆಗೆ ಖಾಲಿ ಇರುವ ಅಂಗನವಾಡಿ ಕೇಂದ್ರಗಳ ಪಟ್ಟಿ

| ಕ್ರ.ಸಂ. | ತಾಲೂಕಿನ ಹೆಸರು | ಗ್ರಾಮ ಪಂಚಾಯತ್ | ಅಂಗನವಾಡಿ ಕೇಂದ್ರದ ಹೆಸರು | ನಿಗದಿಪಡಿಸಲಾದ ವರ್ಗ |
|---|---|---|---|---|
| 1 | ಮಡಿಕೇರಿ | ಬಲ್ಲಮಾವಟಿ | ಬಲ್ಲಮಾವಟಿ ಟೌನ್ | ಇತರೆ |
| 2 | ಮಡಿಕೇರಿ | ಪೆರಾಜೆ | ಕುಂಬಳಚೇರಿ | ಇತರೆ |
| 3 | ಮಡಿಕೇರಿ | ಬಲ್ಲಮಾವಟಿ | ಬಲ್ಲಮಾವಟಿ 1 | ಇತರೆ |
| 4 | ಮಡಿಕೇರಿ | ಕುಂದಚೇರಿ | ಚೆರಂಡೇಟಿ | ಇತರೆ |
| 5 | ಮಡಿಕೇರಿ | ಗಾಳಿಬೀಡು | ಗಾಳಿಬೀಡು 2 | ಇತರೆ |
| 6 | ಮಡಿಕೇರಿ | ಮೂರ್ನಾಡು | ಮುತ್ತಾರುಮುಡಿ | ಇತರೆ |
| 7 | ಮಡಿಕೇರಿ | ನಗರಸಭೆ ವಾರ್ಡ್ ಸಂಖ್ಯೆ 23 | ಕುಂಬಳಗೇರಿ ಉಕ್ಕುಡ | ಎಸ್.ಸಿ. |
| 8 | ಮಡಿಕೇರಿ | ಗಾಳಿಬೀಡು | ವಣಚಲು | ಇತರೆ |
| 9 | ಮಡಿಕೇರಿ | ನಗರಸಭೆ ವಾರ್ಡ್ ಸಂಖ್ಯೆ 9 | ಕಾಲೇಜು ಹಿಂಭಾಗ | ಇತರೆ |
| 10 | ಸೋಮವಾರಪೇಟೆ | ಮಾದಪುರ | ಲಕ್ಕೇರಿ ಪೈಸಾರಿ | ಎಸ್. ಸಿ. |
| 11 | ಸೋಮವಾರಪೇಟೆ | ಗರ್ವಾಲೆ | ಮಾದಪುರ ಎ | ಇತರೆ |
| 12 | ಸೋಮವಾರಪೇಟೆ | ಕಿರಗಂದೂರು | ಕೋವರ್‌ಕೊಲ್ಲಿ | ಎಸ್. ಸಿ. |
| 13 | ಸೋಮವಾರಪೇಟೆ | ಮುಳ್ಳುಸೋಗೆ | ಮುಳ್ಳುಸೋಗೆ 1 | ಇತರೆ |
| 14 | ಸೋಮವಾರಪೇಟೆ | ಕೂಡಿಗೆ | ಹಳೇಕೂಡಿಗೆ | ಇತರೆ |
| 15 | ಸೋಮವಾರಪೇಟೆ | ಹಂಡ್ಲಿ | ಅವರೆದಾಳು | ಇತರೆ |
| 16 | ಸೋಮವಾರಪೇಟೆ | ಬೆಸೂರು | ಕಟ್ಟೆಪುರ | ಇತರೆ |
| 17 | ಸೋಮವಾರಪೇಟೆ | ದುಂಡಳ್ಳಿ | ಸುಳಿಗಳಲೆ ಕಾಲೋನಿ | ಎಸ್.ಸಿ. |
| 18 | ಸೋಮವಾರಪೇಟೆ | ದುಂಡಳ್ಳಿ | ಮಾದ್ರೆ | ಇತರೆ |
| 19 | ಸೋಮವಾರಪೇಟೆ | ಗಣಗೂರು | ಗೋಣಿಮರೂರು | ಇತರೆ |
| 20 | ಸೋಮವಾರಪೇಟೆ | ನೇರುಗಳಲೆ | ಯಲಕನೂರು ಹೊಸಳ್ಳಿ | ಇತರೆ |
| 21 | ಸೋಮವಾರಪೇಟೆ | ಚೌಡ್ಲು | ಕಾನ್ವೆಂಟ್ ಬಾಣೆ | ಇತರೆ |
| 22 | ಸೋಮವಾರಪೇಟೆ | ಹಾನಗಲ್ಲು | ಹಾನಗಲ್ಲು ಶೆಟ್ಟಳ್ಳಿ | ಇತರೆ |

ಉಪ ನಿರ್ದೇಶಕರು
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮಡಿಕೇರಿ, ಕೊಡಗು ಜಿಲ್ಲೆ

| | | | | |
|---|---|---|---|---|
| 23 | ಸೋಮವಾರಪೇಟೆ | ತೋಳೂರು ಶೆಟ್ಟಳ್ಳಿ | ಇನಕನಹಳ್ಳಿ | ಇತರೆ |
| 24 | ಸೋಮವಾರಪೇಟೆ | ಕಂಬಿಬಾಣೆ | ಭೂತನಕಾಡು | ಎಸ್.ಸಿ. |
| 25 | ಸೋಮವಾರಪೇಟೆ | ನೆಲ್ಲಿಹುದಿಕೇರಿ | ಹೊಳೆಕೆರೆ ಪೈಸಾರಿ | ಇತರೆ |
| 26 | ಪೊನ್ನಂಪೇಟೆ | ಬಿ.ಶೆಟ್ಟಿಗೇರಿ | ಕಾಟಿಗುಂಡಿ ಪೈಸಾರಿ | ಇತರೆ |
| 27 | ಪೊನ್ನಂಪೇಟೆ | ಬಿ.ಶೆಟ್ಟಿಗೇರಿ | ಬಿ.ಶೆಟ್ಟಿಗೇರಿ | ಇತರೆ |
| 28 | ಪೊನ್ನಂಪೇಟೆ | ಬಾಳೆಲೆ | ದೇವನೂರು 2 | ಎಸ್.ಟಿ. |
| 29 | ಪೊನ್ನಂಪೇಟೆ | ಬಿರುನಾಣಿ | ತೆರಾಲು 2 | ಇತರೆ |
| 30 | ಪೊನ್ನಂಪೇಟೆ | ಹಾತೂರು | ಕುಂದ | ಇತರೆ |
| 31 | ಪೊನ್ನಂಪೇಟೆ | ಹಾತೂರು | ಗದ್ದೆಮಾನಿ | ಇತರೆ |
| 32 | ಪೊನ್ನಂಪೇಟೆ | ಹಾತೂರು | ಹೊಸನಲ್ಲಿಕೋಟೆ | ಇತರೆ |
| 33 | ಪೊನ್ನಂಪೇಟೆ | ಹುದಿಕೇರಿ | ಆಂಗೋಡು | ಇತರೆ |
| 34 | ಪೊನ್ನಂಪೇಟೆ | ಹುದಿಕೇರಿ | ಹೈಸೊಡ್ಲೂರು | ಇತರೆ |
| 35 | ಪೊನ್ನಂಪೇಟೆ | ಹೊಸೂರು | ದುಬಾರೆ ಕಲ್ಲುಕೋರೆ | ಎಸ್.ಸಿ. |
| 36 | ಪೊನ್ನಂಪೇಟೆ | ಶ್ರೀಮಂಗಲ | ಬೀರುಗ 1 | ಎಸ್.ಟಿ. |
| 37 | ಪೊನ್ನಂಪೇಟೆ | ಟಿ.ಶೆಟ್ಟಿಗೇರಿ | ಕುಂದೂರು | ಇತರೆ |
| 38 | ಪೊನ್ನಂಪೇಟೆ | ಕೆದಮಳ್ಳೂರು | ಕ್ರೀಶ್ಚಿಯನ್ ಕಾಲೋನಿ | ಇತರೆ |
| 39 | ಪೊನ್ನಂಪೇಟೆ | ಬಿಟ್ಟಂಗಾಲ | ರುದ್ರಗುಪ್ಪೆ | ಇತರೆ |
| 40 | ಪೊನ್ನಂಪೇಟೆ | ಅಮ್ಮತ್ತಿ | ಪುಲಿಯೇರಿ | ಇತರೆ |
| 41 | ಪೊನ್ನಂಪೇಟೆ | ಮಾಯಾಮುಡಿ | ಅಂಬುಕೋಟೆ | ಎಸ್.ಟಿ. |
| 42 | ಪೊನ್ನಂಪೇಟೆ | ಪೊನ್ನಪ್ಪಸಂತೆ | ಬೆಸಗೂರು 2 | ಎಸ್.ಟಿ. |
| 43 | ಪೊನ್ನಂಪೇಟೆ | ತಿತಿಮತಿ | ಕಲ್ತೋಡು | ಎಸ್.ಟಿ. |
| 44 | ಪೊನ್ನಂಪೇಟೆ | ಹುದಿಕೇರಿ | ಬೇಗೂರು 2 | ಇತರೆ |
| 45 | ಪೊನ್ನಂಪೇಟೆ | ಬಿಟ್ಟಂಗಾಲ | ನಾಂಗಾಲ | ಇತರೆ |
| 46 | ಪೊನ್ನಂಪೇಟೆ | ಹಾಲುಗುಂದ | ಬೈರಂಬಾಡ | ಇತರೆ |
| 47 | ಪೊನ್ನಂಪೇಟೆ | ಪೊನ್ನಂಪೇಟೆ | ಪೊನ್ನಂಪೇಟೆ 3 | ಇತರೆ |
| 48 | ಪೊನ್ನಂಪೇಟೆ | ಮಾಲ್ದಾರೆ | ಬಾಡಗಬಾಣಂಗಾಲ | ಇತರೆ |
| 49 | ಪೊನ್ನಂಪೇಟೆ | ಕಣ್ಣಂಗಾಲ | ಕಣ್ಣಂಗಾಲ | ಇತರೆ |
| 50 | ಪೊನ್ನಂಪೇಟೆ | ಪಟ್ಟಣ ಪಂಚಾಯತ್ | ಅಯ್ಯಪ್ಪಬೆಟ್ಟ | ಇತರೆ |

ಉಪ ನಿರ್ದೇಶಕರು
ಮಹಿಳೆಯರ ಮತ್ತು [illegible]
ಮಡಿಕೇರಿ, [illegible]